**ಕರ್ನಾಟಕ ಸರ್ಕಾರ**

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM1/03/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು - 560001.
ದಿನಾಂಕ:09-05-2022

**-:: ಸುತ್ತೋಲೆ ::-**

**ವಿಷಯ:** ಸರ್ಕಾರಿ ಇಂಜಿನಿಯಿರಿಂಗ್ ಕಾಲೇಜುಗಳ ವಿದ್ಯಾರ್ಥಿಗಳಿಗೆ ಸಮಿಪದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಾಯೋಗಿಕ ತರಗತಿ ಹಾಗೂ ಪರೀಕ್ಷೆಗಳನ್ನು ನಡೆಸಲು ಇಲಾಖೆಯಿಂದ ಪೂರ್ವಾನುಮತಿ ಪಡೆಯುವ ಬಗ್ಗೆ.

**ಉಲ್ಲೇಖ:-** ಸರ್ಕಾರದ ಪತ್ರ ಸಂ. ಇಡಿ 53 ಟಿಇಸಿ 2008, ದಿ:08-04-2008

******

ಉಲ್ಲೇಖಿತ ಸರ್ಕಾರದ ಪತ್ರದನ್ವಯ ರಾಜ್ಯದಲ್ಲಿ ಹೊಸದಾಗಿ ಪ್ರಾರಂಭಿಸಲಾಗಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಾಯೋಗಿಕ ಸೌಲಭ್ಯಗಳು ಸ್ಥಾಪಿತವಾಗುವವರೆಗೆ ಸದರಿ ಕಾಲೇಜುಗಳ ವಿದ್ಯಾರ್ಥಿಗಳಿಗೆ "ಆಪ್ತಮಿತ್ರ" ಯೋಜನೆಯಡಿ ಸಮೀಪದ ಇತರೆ ಖಾಸಗಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಾಯೋಗಿಕ ತರಬೇತಿ ಹಾಗೂ ಪರೀಕ್ಷೆಗಳನ್ನು ನಡೆಸಲು ಅನುಮತಿ ನೀಡಲಾಗಿದೆ. ಈ ಕುರಿತಂತೆ ಪ್ರತಿ ಶೈಕ್ಷಣಿಕ ವರ್ಷದಲ್ಲಿಯೂ ಆಯುಕ್ತಾಲಯದಿಂದ ಪೂರ್ವಾನುಮತಿ ಪಡೆದು ಆನಂತರ ಸಮೀಪದ ಇತರೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಾಯೋಗಿಕ ತರಬೇತಿ, ಪರೀಕ್ಷೆಗಳನ್ನು ಕೈಗೊಳ್ಳುವುದಕ್ಕೆ ವೆಚ್ಚವಾಗುವ ಮೊತ್ತವನ್ನು ಪಾವತಿಸಬಹುದಾಗಿದೆ.

ಆದರೆ, ಕೆಲವು ಸರ್ಕಾರಿ ಇಂಜಿನಿಯರಿಂಗ್ ಪ್ರಾಂಶುಪಾಲರುಗಳು ಇಲಾಖಾ ಮುಖ್ಯಸ್ಥರ ಪೂರ್ವಾನುಮತಿ ಇಲ್ಲದೆ ಹಲವಾರು ಶೈಕ್ಷಣಿಕ ವರ್ಷಗಳಲ್ಲಿ ಖಾಸಗಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ತಮ್ಮ ವಿದ್ಯಾರ್ಥಿಗಳಿಗೆ ಮೇಲ್ಕಂಡ ಶೈಕ್ಷಣಿಕ ಚಟುವಟಿಕೆಗಳನ್ನು ಕೈಗೊಂಡು ನಂತರ ಸದರಿ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಪ್ರಾಯೋಗಿಕ ತರಬೇತಿ ವೆಚ್ಚಗಳನ್ನು ಭರಿಸುವ ಸಂಬಂಧ ಡಿ.ಸಿ ಬಿಲ್ ತಯಾರಿಸಿ ಮೇಲು ರುಜುಗಾಗಿ ಕೇಂದ್ರ ಕಛೇರಿಗೆ ಸಲ್ಲಿಸುವ ಪರಿಪಾಠ ರೂಢಿಸಿಕೊಂಡಿರುವುದನ್ನು ಗಮನಿಸಲಾಗಿದೆ. ಈ ರೀತಿಯ ಬಿಲ್‌ಗಳನ್ನು ಪಾವತಿಸಲು ಇಲಾಖೆಯ ಆಯವ್ಯಯದ ಪೂರ್ವ ಸಿದ್ಧತೆ ಇಲ್ಲದಿರುವ ಸಂದರ್ಭಗಳಲ್ಲಿ ಇಂತಹ ಪ್ರಕ್ರಿಯೆಯಿಂದ ಇಲಾಖೆಯ ಆರ್ಥಿಕ ಶಿಸ್ತು ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳ ಮೇಲೆ ನೇರ ಅಡ್ಡಪರಿಣಾಮ ಉಂಟಾಗುತ್ತದೆ.

ಈ ಹಿನ್ನೆಲೆಯಲ್ಲಿ ಇನ್ನುಮುಂದೆ ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳು ತಮ್ಮ ಸಂಸ್ಥೆಯಲ್ಲಿ ಪ್ರಾಯೋಗಾಲಯಗಳು ಸ್ಥಾಪಿತವಾಗುವವರೆಗೂ ಪ್ರತಿ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಸಂಖ್ಯೆ, ಪ್ರಾಯೋಗಾಲಯದ ಹೆಸರು, ಪ್ರಾಯೋಗಿಕ ತರಗತಿಗಳ ವೆಚ್ಚ ಹಾಗೂ ಇನ್ನಿತರ ಅಗತ್ಯ ದಾಖಲೆಗಳೊಂದಿಗೆ ಪೂರ್ಣ ಪ್ರಮಾಣದ ಪ್ರಸ್ತಾವನೆಯನ್ನು ಆಯುಕ್ತಾಲಯಕ್ಕೆ ಸಲ್ಲಿಸಿ ಇಲಾಖಾ ಮುಖ್ಯಸ್ಥರ ಪೂರ್ವಾನುಮತಿ ಪಡೆದು ಸಮೀಪದ ಬೇರೊಂದು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿ ಹಾಗೂ ಪರೀಕ್ಷೆಗಳನ್ನು ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು. ಒಂದು ವೇಳೆ ಮೇಲಿನ ಕಂಡಿಕೆ(2)ರಲ್ಲಿ ತಿಳಿಸಿರುವ ತಪ್ಪುಗಳನ್ನು ಪುನರಾವರ್ತಿಸಿ ಪ್ರಾಯೋಗಿಕ ತರಬೇತಿ ವೆಚ್ಚಗಳನ್ನು ಪಾವತಿಸಲು ತೊಂದರೆಯಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

9/5/22

**ಸಹಾಯಕ ನಿರ್ದೇಶಕರು(ಎಂಪಿಸಿ)**
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಇವರಿಗೆ,**

**ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,**

**ಪ್ರತಿ ಮಾಹಿತಿಗಾಗಿ:-**

1. **ಡಿವಿಪಿ(1) ವಿಭಾಗಕ್ಕೆ.**
2. **ಲೆಕ್ಕ ಪತ್ರ ವಿಭಾಗಕ್ಕೆ .3.ಕಡತಕ್ಕೆ.**

Scanned with CamScanner